**ಓ.ಎಸ್. ನಂಬರಃ 20/2020**

**ಪಿ. ಡಬ್ಲ್ಯೂಃ 1**

(ಸಾಕ್ಷಿಗೆ ಪ್ರಮಾಣವಚನ ಭೋದಿಸಲಾಯಿತು, ತಾಃ 31-07-2025)

**ಪಾಟೀ ಸವಾಲು : ಪ್ರತಿವಾದಿ ಪರ ಶ್ರೀ ಎಸ್.ಬಿ.ಬಿ. ವಕೀಲರಿಂದ,**

ನಿಪಿ-23 ರಲ್ಲಿರುವ ಎಲ್ಲಾ ಆಸ್ತಿಗಳು ನಮ್ಮ ಕುಟುಂಬದ ಆಸ್ತಿಯಾಗಿರುವುದಿಲ್ಲ, ನಮ್ಮ ಆಸ್ತಿಯಾಗಿರುತ್ತದೆ. ಸದ್ರಿ ದಾಖಲೆಯನ್ನು ಸರ್ವೆ ನಂ. 427/1ಬ ಕ್ಕೆ ಸಂಬಂಧಿಸಿದಂತೆ ಹಾಜರುಪಡಿಸಿರುತ್ತೇನೆ. ಈ ದಾವೆಯನ್ನು ಸರ್ವೆ ನಂ. 427/1ಬ ಕ್ಕೆ ಸಂಬಂಧಿಸಿದಂತೆ ದಾಖಲಿಸಿರುತ್ತೇನೆ. ಸದ್ರಿ ಸರ್ವೆ ನಂ. 427/1ಬ ಗೆ ಪ್ರತ್ಯೇಕ ಪಹಣಿ ಪತ್ರಿಕೆ ಮತ್ತು ಸರ್ವೆ ನಕಾಶೆ ಇರುತ್ತದೆ. ಸದ್ರಿ ಪಹಣಿ ಪತ್ರಿಕೆ ಮತ್ತು ಸರ್ವೆ ನಕಾಶೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಸದ್ರಿ ಸರ್ವೆ ನಂ. 427/1ಬ ಕ್ಕೆ ಸಂಬಂಧಿಸಿದಂತೆ ಈ ದಾವೆಯನ್ನು ದಾಖಲಿಸಿರುವುದಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ಸದ್ರಿ ಸರ್ವೆ ನಂ. 427/1ಬ ಕ್ಕೆ ಸಂಬಂಧಿಸಿದಂತೆ ಪಹಣಿ ಪತ್ರಿಕೆ ಮತ್ತು ಸರ್ವೆ ನಕಾಶೆಯನ್ನು ಈ ದಾವೆಯಲ್ಲಿ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-23 ರಲ್ಲಿರುವ ಆಸ್ತಿಗಳು ನಮ್ಮ ಕುಟುಂಬದ ಆಸ್ತಿಗಳಾಗಿದ್ದು, ನನ್ನ ತಂದೆಯ ಸಹೋದರ, ಸಹೋದರಿಗೂ ಸಂಬಂಧಪಟ್ಟ ಆಸ್ತಿಯಾಗಿರುತ್ತದೆ ಎಂದರೆ, ಸಾಕ್ಷಿಯು ಇಲ್ಲ, ನನ್ನ ತಂದೆಗೆ ಅವರ ತಂದೆಯಿಂದ ಬಂದ ಆಸ್ತಿಯಾಗಿರುತ್ತದೆ ಎಂದು ಉತ್ತರಿಸಿರುತ್ತಾರೆ.

**ಮರು ವಿಚಾರಣೆಃ ಇಲ್ಲ.**

(ನನ್ನ ಹೇಳಿಕೆ ಪ್ರಕಾರ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ. ಹೇ.ಕೇ. ಸರಿ ಇದೆ.**

**ಸಹಿ ಇದೆ.**

**ಹೆಚ್ಚುವರಿ ಸಿವಿಲ್ ಜಡ್ಜ್, ಭಟ್ಕಳ.**